ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಶಿಇ 208 ವರ್ಗಾವಣೆ 2017-18 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 09/06/2017

## ತಿದ್ದುಪಡಿ ಆದೇಶ

ವಿಷಯ: 2017-18ನೇ ಸಾಲಿನ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರ ಸಾರ್ವಜನಿಕ ಹಿತಾಸಕ್ತಿ ಮೇರೆಗೆ ವರ್ಗಾವಣೆ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮಸಂಖ್ಯೆ ಆದೇಶದ ದಿನಾಂಕ : 01.06.2017.

****

ಉಲ್ಲೇಖಿತ ಆದೇಶದಲ್ಲಿ 2017-18ನೇ ಸಾಲಿನ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ನಿರ್ದೇಶಕರ ಸಾರ್ವಜನಿಕ ಹಿತಾಸಕ್ತಿ ಮೇರೆಗೆ ವರ್ಗಾವಣೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ಆದೇಶದ ಸೂಚನೆ ಸಂಖ್ಯೆ : 01 ರಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದ್ದು,

> "ಮೇಲ್ಕಂಡ ಆದೇಶದಲ್ಲಿ ಖಾಲಿ ಹುದ್ದೆಗಳಿಗೆ ಎದುರಾಗಿ ವರ್ಗಾವಣೆಗೊಂಡಿರುವ ಬೋಧಕರುಗಳ ಸ್ಥಳಗಳಿಗೆ ಇತರ ಖಾಯಂ ಉಪನ್ಯಾಸಕರು ವರ್ಗಾವಣೆಗೊಂಡು ಕರ್ತವ್ಯಕ್ಕೆ ಹಾಜರಾದ ನಂತರದಲ್ಲಿಯೇ, ಈ ಉಪನ್ಯಾಸಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಪ್ರಾಂಶುಪಾಲರುಗಳಿಗೆ ಸೂಚನೆ ನೀಡಿದೆ".

ಇದನ್ನು ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು.

> " ಮೇಲ್ಕಂಡ ಆದೇಶದಲ್ಲಿ ವರ್ಗಾವಣೆಗೊಂಡಿರುವ ಬೋಧಕರುಗಳಲ್ಲಿ ಪಿಹೆಚ್.ಡಿ. ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರುಗಳಾಗಿರುವ ಬೋಧಕರ ವರ್ಗಾವಣೆಯನ್ನು(ಮುಂದಿನ ಆದೇಶದವರೆಗೆ) ತಡೆಹಿಡಿಯಲಾಗಿದೆ. ಇತರ ಬೋಧಕರುಗಳು ತಮ್ಮ ಪ್ರಭಾರವನ್ನು ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿರುವವರಲ್ಲಿ ಹಿರಿಯ ಬೋಧಕರಿಗೆ ವಹಿಸಿದ ನಂತರ ಈ ಉಪನ್ಯಾಸಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಪ್ರಾಂಶುಪಾಲರುಗಳಿಗೆ ಸೂಚನೆ ನೀಡಿದೆ."

**(ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

Sd/-
**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

<u>ಇವರಿಗೆ:</u>

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ – ತುರ್ತು ಕ್ರಮಕ್ಕಾಗಿ.
2. ವರ್ಗಾವಣೆಗೊಂಡ ಸಹ/ಸಹಾಯಕ ಪ್ರಾಧ್ಯಾಪಕರುಗಳಿಗೆ – ತುರ್ತು ಕ್ರಮಕ್ಕಾಗಿ.

**ಪ್ರತಿ ರವಾನೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು – ಮಾಹಿತಿಗಾಗಿ.
4. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು – ಮಾಹಿತಿಗಾಗಿ.
5. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಅಧೀಕ್ಷಕರು –ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
7. ಹೆಚ್ಚುವರಿ ಪ್ರತಿ.
8. ಕಛೇರಿ ಪ್ರತಿ.